ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

23

ಇಲಾಖೆ / ವಿಷಯ : DEPARTMENT / SUBJECT: ಗೃಹ - ಸಿ.ಡಿ ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE 11/3/2021

### ಗೃಹ ಸಚಿವ ಬೊಮ್ಮಾಯಿ ಮಹತ್ವದ ಘೋಷಣೆ । ಅಪರ ಪೊಲೀಸ್ ಆಯುಕ್ತ ಸೌಮೇಂದು ಮುಖರ್ಜಿ ನೇತೃತ್ವ

# ಅಶ್ಲೀಲ ಸಿಡಿ ತನಿಖೆ ಹೊಣೆ ಎಸ್ಐಟಿ ಹೆಗಲಿಗೆ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು 11-3-21

ರಾಜ್ಯ ರಾಜಕೀಯದಲ್ಲಿ ಸಂಚಲನ ಸೃಷ್ಟಿಸಿರುವ 'ಅಶ್ಲೀಲ ಸಿಡಿ' ಪ್ರಕರಣವನ್ನು ವಿಶೇಷ ತನಿಖಾ ತಂಡ (ಎಸ್ಐಟಿ)ಕ್ಕೆ ಒಪ್ಪಿಸುವ ಮಹತ್ವದ ನಿರ್ಧಾರವನ್ನು ರಾಜ್ಯ ಸರ್ಕಾರ ಕೈಗೊಂಡಿದೆ. ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳ ಜತೆಗೆ ಚರ್ಚಿಸಿದ ನಂತರ ಈ ತೀರ್ಮಾನಕ್ಕೆ ಬರಲಾಗಿದೆ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಘೋಷಿಸಿದರು.

ಇಡೀ ದಿನ ಚರ್ಚೆಯ ಬಳಿಕ ಬುಧವಾರ ಸಂಜೆ ಸುದ್ದಿಗಾರರೊಂದಿಗೆ ಮಾತನಾಡಿದ ಬೊಮ್ಮಾಯಿ, ಮಾಜಿ ಸಚಿವ ರಮೇಶ್ ಜಾರಕಿಹೊಳಿ ಮನವಿಗೆ ಸ್ಪಂದಿಸಿ ಈ ಕ್ರಮಕೈಗೊಳ್ಳಲಾಗಿದೆ. ಅಪರ ಪೊಲೀಸ್ ಆಯುಕ್ತ ಸೌಮೇಂದು ಮುಖರ್ಜಿ ನೇತೃತ್ವದ ಎಸ್ಐಟಿಗೆ ತನಿಖೆ ಜವಾಬ್ದಾರಿ ಒಪ್ಪಿಸಲಾಗಿದೆ ಎಂದರು. ಷಡ್ಯಂತ್ರದ ಹಿಂದೆ ಯಾರೆಲ್ಲ ಇದ್ದಾರೆ ಎನ್ನುವುದನ್ನು ತನಿಖಾ ತಂಡ ಭೇದಿಸಲಿದೆ. ಈ ಸಿಡಿ ತಯಾರಿಸಿದ್ದು ಎಲ್ಲಿ? ಹೇಗೆ? ವ್ಯವಸ್ಥಿತ ಸಂಚಿಗೆ ಕಾರಣಗಳೇನು? ಇತ್ಯಾದಿ ಅಂಶಗಳ ಬಗ್ಗೆ ವಿಸ್ತೃತ ತನಿಖೆ ನಡೆಸಿ, ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ವರದಿ ಸಲ್ಲಿಸಲಿದೆ ಎಂದು ತಿಳಿಸಿದರು.

**ಕುತೂಹಲಕ್ಕೆ ತೆರೆ:** ಪ್ರಕರಣದ ತನಿಖೆ ಕುರಿತು ಸೂಕ್ತ ತೀರ್ಮಾನ ತೆಗೆದುಕೊಳ್ಳುವುದಾಗಿ ಯಡಿಯೂರಪ್ಪ ಬೆಳಗ್ಗೆಯೇ ತಿಳಿಸಿದ್ದರು. ಇದರಿಂದಾಗಿ ಪ್ರಕರಣ ಸಿಬಿಐ, ಇಲ್ಲವೇ ಸಿಐಡಿಗೆ ಒಪ್ಪಿಸುವ ಬಗ್ಗೆ ಬಿಸಿಬಿಸಿ ಚರ್ಚೆ ನಡೆದು ತೀವ್ರ ಕುತೂಹಲ ಕೆರಳಿಸಿತ್ತು. ತನಿಖೆಗೆ ಎಸ್ಐಟಿ ರಚಿಸಲಾಗಿದೆ ಎಂದು ಬೊಮ್ಮಾಯಿ ಹೇಳುವ ಮೂಲಕ ಕುತೂಹಲಕ್ಕೆ ತೆರೆ ಎಳೆದಿದ್ದಾರೆ.

## ಪತ್ರ ಬರೆದ ರಮೇಶ್

**ರಮೇಶ್ ಜಾರಕಿಹೊಳಿ ನನಗೆ ಪತ್ರ ಬರೆದಿದ್ದರು. ಅಲ್ಲದೆ, ಮಾ.2ರಂದು ಕಬ್ಬನ್ ಪಾರ್ಕ್ ಠಾಣೆಗೆ ಅರ್ಜಿ ನೀಡಿದ್ದು, ಈ ಪ್ರಕರಣದಲ್ಲಿ ತಮ್ಮ ರಾಜಕೀಯ ತೇಜೋವಧೆ ಹಾಗೂ ಮಾನಹಾನಿ ಮಾಡುವ ಉದ್ದೇಶವಿದೆ. ಹಲವಾರು ಮಂದಿ ಸೇರಿ ಷಡ್ಯಂತ್ರ ರೂಪಿಸಿರುವುದು ಬಹಳ ಸ್ಪಷ್ಟವಾಗಿ ಕಾಣಿಸುತ್ತದೆ ಎಂದು ತಿಳಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಷಡ್ಯಂತ್ರ ರೂಪಿಸಿರುವ, ಇದರ ಹಿಂದಿರುವ ವ್ಯಕ್ತಿಗಳ ಬಗ್ಗೆ ಕೂಲಂಕಷ ವಿಚಾರಣೆ ಮಾಡಲೆಂದು ವಿಶೇಷ ತನಿಖಾ ತಂಡ ರಚಿಸಲಾಗಿದೆ. ಈ ಬಗ್ಗೆ ಸಂಪೂರ್ಣ ವರದಿಯನ್ನು ಎಸ್ಐಟಿ ಸಲ್ಲಿಸಿದ ನಂತರ ಸರ್ಕಾರ ಸೂಕ್ತ ಕ್ರಮವಹಿಸಲಿದೆ ಎಂದು ಬೊಮ್ಮಾಯಿ ಹೇಳಿದರು.**

## ಕಾಂಗ್ರೆಸ್ ಕೈವಾಡ ಎಸ್‌ಟಿಎಸ್ ಆರೋಪ, ಯೂಟರ್ನ್

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಅಶ್ಲೀಲ ಸಿಡಿ ಹಿಂದೆ ಕಾಂಗ್ರೆಸ್ ಇದೆ. ಇಂಥ ಮನೆ ಹಾಳು ಕೆಲಸವನ್ನು ಮಾಡುವುದು ಕಾಂಗ್ರೆಸ್‌ಗೆ ಕರಗತವಾಗಿದೆ ಎಂದು ವಾಗ್ದಾಳಿ ನಡೆಸಿರುವ ಸಹಕಾರ ಸಚಿವ ಎಸ್.ಟಿ. ಸೋಮಶೇಖರ್ ಅವರು ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರ ಜೊತೆಗೆ ಮಾತನಾಡಿ, ನಾನು ಕಾಂಗ್ರೆಸ್‌ನಲ್ಲಿ 20 ವರ್ಷ ಇದ್ದವನು. ಅಲ್ಲಿ ಏನು ನಡೆಯುತ್ತದೆ ಎನ್ನುವುದು ನನಗೆ ಚೆನ್ನಾಗಿ ಗೊತ್ತು ಎಂದರು. ಸಚಿವರನ್ನು ಟಾರ್ಗೆಟ್ ಮಾಡಿದರೆ, ರಾಜೀನಾಮೆ ಕೊಡಿಸಬಹುದು, ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸಬಹುದು ಅನ್ನೋದು ಅವರ ಉದ್ದೇಶ ಎಂದರು.

**ಯೂಟರ್ನ್:** ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಸ್ವಲ್ಪ ಹೊತ್ತಿಗೆ ವಿಧಾನಸೌಧದಲ್ಲಿ ಗೃಹ ಸಚಿವರ ಭೇಟಿಯ ನಂತರ ಮಾತನಾಡಿದ ಸೋಮಶೇಖರ್, ನಾನು ಸಿಡಿ ಹಿಂದೆ ಕಾಂಗ್ರೆಸ್ ಇದೆ ಎಂದು ಹೇಳಿಲ್ಲ, ಬದಲಾಗಿ ತನಿಖೆಯಿಂದ ಎಲ್ಲ ಗೊತ್ತಾಗಲಿದೆ ಎಂಬ ಮಾತು ಹೇಳಿದ್ದೆ ಎಂದು ಯೂಟರ್ನ್ ತೆಗೆದುಕೊಂಡರು.



ಪ್ಯಾಂಟ್ ಜಾರಿದರೆ ಅವರ ಪ್ಯಾಂಟನ್ನು ಅವರೇ ಹಾಕಿಕೊಳ್ಳಬೇಕು. ಮತ್ತೊಬ್ಬರು ಪ್ಯಾಂಟ್ ಹಾಕೋಕೆ ಆಗಲ್ಲ. ಪೊಲಿಟಿಕಲ್ ಗೇಮ್‌ನಲ್ಲಿ ಕೆಲವರು ಷಡ್ಯಂತ್ರ ಮಾಡುತ್ತಾರೆ. ಎಚ್ಚರಿಕೆಯಿಂದಿರಬೇಕು. 3 ಬಾರಿ ಸಚಿವರಾದವರು ದಡ್ಡರಾ? ಸಿಡಿ ನಕಲಿಯೋ? ಅಸಲಿಯೋ? ಅನ್ನುವುದನ್ನು ಮಾಧ್ಯಮಗಳು ನಿರ್ಧರಿಸಲಿ, ಪಾಪ ರಮೇಶ್ ಜಾರಕಿಹೊಳಿ ನೊಂದಿದ್ದಾನೆ.

। ಡಿ.ಕೆ.ಶಿವಕುಮಾರ್ ಕೆಪಿಸಿಸಿ ಅಧ್ಯಕ್ಷ